ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: DTE-ADMIOEST(3)/8/2021

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 02.03.2021

**ಸುತ್ತೋಲೆ**

**ವಿಷಯ :** ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸಂಸ್ಥೆಗಳಿಗೆ ಭದ್ರತಾ ಸಿಬ್ಬಂದಿ / ಪಹರೆಗಾರರ ಸೇವೆಯನ್ನು ಒದಗಿಸುವ ಬಗ್ಗೆ.

**ಉಲ್ಲೇಖ:** 1. ಇಲಾಖೆಯ ಅಧೀನದಲ್ಲಿನ ಸಂಸ್ಥೆಗಳ ಪ್ರಸ್ತಾವನೆಗಳು.
2. ಈ ಕಛೇರಿ ಅಧಿಸೂಚನೆ ಸಂಖ್ಯೆ: DTE-ADMIOEST(3)/42/2020, ದಿನಾಂಕ: 21.01.2021

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಸುರಕ್ಷತೆಗಾಗಿ ಭದ್ರತಾ ಸಿಬ್ಬಂದಿ / ಪಹರೆಗಾರರ ಸೇವೆಯನ್ನು ಒದಗಿಸುವಂತೆ ಅನೇಕ ಸಂಸ್ಥೆಗಳಿಂದ ಪ್ರಸ್ತಾವನೆಗಳು ಸ್ವೀಕೃತಗೊಂಡಿರುತ್ತವೆ. ಪ್ರಸ್ತುತ ಹೊರ ಸಂಪನ್ಮೂಲ ಏಜೆನ್ಸಿ ಮುಖಾಂತರ ಸಂಸ್ಥೆಯಲ್ಲಿ ಗ್ರೂಪ್-ಡಿ ವರ್ಗದ ಸಿಬ್ಬಂದಿಗಳ ಸೇವೆಯನ್ನು ಹೊರಗುತ್ತಿಗೆ ಮೇರೆಗೆ ಪಡೆಯಲು ಸೂಚಿಸಲಾಗಿದೆ. ಈ ಹಿನ್ನೆಲೆಯಲ್ಲಿ ಪ್ರಸ್ತುತ ಹೊರಗುತ್ತಿಗೆ ಆಧಾರದ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಪೈಕಿ ತಾತ್ಕಾಲಿಕವಾಗಿ ಹಗಲು / ರಾತ್ರಿ ಪಾಳಿಯ ಪ್ರಕಾರ ಕೆಲಸ ನಿರ್ವಹಿಸಲು ಪ್ರಾಂಶುಪಾಲರ ಹಂತದಲ್ಲಿಯೇ ಕೆಲಸವನ್ನು ಹಂಚಿಕೆ ಮಾಡಿಕೊಳ್ಳಲು ಸೂಚಿಸಿದೆ.

**ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ**

**ಜಂಟಿ ನಿರ್ದೇಶಕರು(ಆಡಳಿತ),**
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ:-**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ / ಸರ್ಕಾರಿ ಪಾಲಿಟೆಕ್ನಿಕ್ / ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

**ಪ್ರತಿ:-**

1. ವ್ಯವಸ್ಥಾಪಕರು, ಮೆ॥ ಆಬ್ಜೇಕ್ಟ್ ಟೆಕ್ನಾಲಜೀಸ್, ಬೆಂಗಳೂರು;
2. ವ್ಯವಸ್ಥಾಪಕರು, ಮೆ॥ ಮಾತಾ ಟೆಕ್ನಾಲಜೀಸ್, ಧಾರವಾಡ;
3. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.